ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು

PAPER CLIPPINGS

ಇಲಾಖೆ / ವಿಷಯ : DEPARTMENT / SUBJECT:

ಪತ್ರಿಕೆಯ ಹೆಸರು : NAME OF THE NEWS PAPER:

ದಿನಾಂಕ : DATE : 15/2/2020


# ಸುದ್ದಿವಾಹಿನಿಗಳ ಕ್ಯಾಮೆರಾಗೆ ನಿರ್ಬಂಧ

## ಕಳೆದ ಅಧಿವೇಶನದಲ್ಲೂ ನಿರ್ಬಂಧ ಹೇರಿದ್ದ ಸ್ಪೀಕರ್ ಕಾಗೇರಿ

**ಬೆಂಗಳೂರು:** ಕಳೆದ ವಿಧಾನಸಭೆ ಚಳಿಗಾಲದ ಅಧಿವೇಶನದಲ್ಲಿ ಸದನ ಕಲಾಪ ನೇರ ಪ್ರಸಾರಕ್ಕೆ ಖಾಸಗಿ ಸುದ್ದಿವಾಹಿನಿಗಳ ಕ್ಯಾಮರಾಗಳಿಗೆ ಪ್ರಾಯೋಗಿಕವಾಗಿ ವಿಧಿಸಿದ್ದ ನಿರ್ಬಂಧವನ್ನು ಮುಂದುವರಿಸಲು ನಿರ್ಧರಿಸಿರುವುದಾಗಿ ವಿಧಾನಸಭಾಧ್ಯಕ್ಷ ವಿಶ್ವೇಶ್ವರ ಹೆಗಡೆ ಕಾಗೇರಿ ಹೇಳಿದ್ದಾರೆ.



ಹೀಗಾಗಿ ಇನ್ನು ಮುಂದೆ ವಿಧಾನ ಸಭೆಯ ಕಲಾಪ ನೇರ ಪ್ರಸಾರ ಮಾಡಲು ಖಾಸಗಿ ಸುದ್ದಿವಾಹಿನಿಗಳಿಗೆ ಅವಕಾಶವಿರುವುದಿಲ್ಲ. ಬೆಂಗಳೂರು ದೂರದರ್ಶನ ಕೇಂದ್ರ ಚಿತ್ರರಿಸುವ ನೇರ ಪ್ರಸಾರದ ವಿಡಿಯೋಗಳನ್ನೇ ಬಳಸುವುದು ಅನಿವಾರ್ಯವಾಗಲಿದೆ. ವಿಧಾನ ಸೌಧದಲ್ಲಿನ ಕಚೇರಿಯಲ್ಲಿ ಸೋಮವಾರ ಪತ್ರಿಕಾ ಗೋಷ್ಠಿಯಲ್ಲಿ ಈ ಬಗ್ಗೆ ಮಾಹಿತಿ ನೀಡಿದ ವಿಶ್ವೇಶ್ವರ ಹೆಗಡೆ ಕಾಗೇರಿ, ಲೋಕಸಭೆ, ರಾಜ್ಯಸಭೆಗಳ ಮಾದರಿ ಯಲ್ಲೇ ರಾಜ್ಯದಲ್ಲೂ ಖಾಸಗಿ ಎಲೆಕ್ಟ್ರಾನಿಕ್ ಮಾಧ್ಯಮಗಳು ಸದನ ಕಲಾಪ ನೇರ ಪ್ರಸಾರಕ್ಕೆ ಅವಕಾಶ ನೀಡದಿರಲು ನಿರ್ಣಯ ಕೈಗೊಳ್ಳಲಾಗಿದೆ ಎಂದು ಹೇಳಿದರು.

ಲೋಕಸಭೆ ಹಾಗೂ ರಾಜ್ಯಸಭೆ ಮಾದರಿಯನ್ನೇ ದೇಶದ ಎಲ್ಲ ರಾಜ್ಯಗಳ ವಿಧಾನಸಭೆಗಳೂ ಜಾರಿಗೊಳಿಸಬೇಕು ಎಂಬ ಬಗ್ಗೆ ಹತ್ತಾರು ಬಾರಿ ನಿರಂತರವಾಗಿ ಚರ್ಚೆ ನಡೆದಿದ್ದು ಅನೇಕ ರಾಜ್ಯಗಳು ಅದೇ ಮಾದರಿ ಅನುಸರಿಸುತ್ತಿವೆ. ಹಾಗಾಗಿ ನಮ್ಮ ರಾಜ್ಯದಲ್ಲೂ ಲೋಕಸಭೆ, ರಾಜ್ಯಸಭೆಯ ಮಾದರಿಯನ್ನೇ ಜಾರಿಗೊಳಿಸಲು ತೀರ್ಮಾನಿಸಲಾಗಿದೆ ಎಂದು ಹೇಳಿದರು.

ನಿರ್ಬಂಧ ಮುಂದುವರಿಕೆ ಸರಿಯೇ ಹಾಗೂ ನಿರ್ಬಂಧದಿಂದ ಆಗಿರುವ ಅನುಕೂಲವೇನು ಎಂಬ ಪ್ರಶ್ನೆಗೆ ಪ್ರತಿಕ್ರಿಯಿಸಿದ ವಿಶ್ವೇಶ್ವರ ಹೆಗಡೆ ಕಾಗೇರಿ, ಲೋಕಸಭೆ, ರಾಜ್ಯಸಭೆ ಮಾದರಿಯನ್ನೇ ರಾಜ್ಯದಲ್ಲೂ ಅನುಸರಿಸುತ್ತೇವೆ. ಇಡೀ ದೇಶದಲ್ಲಿ ಚರ್ಚೆಯಾದಂತೆ ಲೋಕಸಭೆ, ರಾಜ್ಯಸಭೆ ಮಾದರಿಯನ್ನೇ ವಿಧಾನಸಭೆಯಲ್ಲಿ ಅನುಷ್ಠಾನಗೊಳಿಸಿದೆ.

▶ 8ನೇ ಪುಟಕ್ಕೆ

# ಸುದ್ದಿವಾಹಿನಿಗಳ ಕ್ಯಾಮೆರಾಗೆ ನಿರ್ಬಂಧ

1ನೇ ಪುಟದಿಂದ ▶ ಅದೇ ಮಾದರಿ ಅನುಸರಿಸಲು ನಿರ್ಧರಿಸಲಾಗಿದೆ. ಈ ವ್ಯವಸ್ಥೆ ಪಾರದರ್ಶಕವಾಗಿರಬೇಕು ಎಂಬ ಬಗ್ಗೆ ನಮ್ಮಲ್ಲಿ ಭಿನ್ನಾಭಿಪ್ರಾಯವಿಲ್ಲ. ಚರ್ಚೆ ಮಾಡುವ ವಿಚಾರ ಪಾರದರ್ಶಕವಾಗಿದ್ದು ಜನತೆಗೆ ಗೊತ್ತಾಗಬೇಕು. ಆ ವ್ಯವಸ್ಥೆ ಜಾರಿಗೊಳಿಸಲು ಬದ್ಧರಾಗಿದ್ದೇವೆ ಎಂದು ತಿಳಿಸಿದರು.

**ಸ್ಪೀಕರ್ ಸಮರ್ಥನೆ:** ನಮ್ಮ ಹಾಗೂ ಮಾಧ್ಯಮಗಳ ನಡುವೆ ಒಂದು ವಿಚಾರದ ಬಗ್ಗೆ ಭಿನ್ನಾಭಿಪ್ರಾಯ ಮೂಡುತ್ತದೆ. ಮಾಧ್ಯಮಗಳು ತಮಗೆ ಬೇಕಾದ ಉತ್ತರ ಬಯಸುತ್ತವೆ. ನಾವು ನಮ್ಮ ನಿಲುವಿಗೆ ಬದ್ಧರಾಗಿರುತ್ತೇವೆ. ಪರಸ್ಪರ ವಿಶ್ವಾಸದಲ್ಲಿದ್ದು ವ್ಯವಸ್ಥೆಗೆ ಶಕ್ತಿ ತುಂಬೋಣ. ಪ್ರಜಾಪ್ರಭುತ್ವದ ನಾಲ್ಕನೇ ಅಂಗ ಎಂದು ಕರೆಸಿಕೊಳ್ಳುವ ಪತ್ರಿಕಾರಂಗದ ಬಗ್ಗೆ ನೂರಕ್ಕೆ ನೂರು ವಿಶ್ವಾಸದಲ್ಲಿರುತ್ತೇವೆ. ತಾವು ಹೇಳುತ್ತಿರುವುದು ನನಗೆ ಅರ್ಥವಾಗಿದ್ದು, ನಾನು ಹೇಳುತ್ತಿರುವುದು ತಮಗೆ ಅರ್ಥವಾಗಿದೆ ಎಂದು ತಿಳಿದಿದ್ದೇನೆ ಎನ್ನುವ ಮೂಲಕ ತಮ್ಮ ನಿರ್ಧಾರವನ್ನು ಸಮರ್ಥಿಸಿಕೊಂಡರು.

## ಎಚ್.ಡಿ.ರೇವಣ್ಣ ಖಂಡನೆ

ವಿಧಾನಸಭೆಯ ಕಲಾಪವನ್ನು ಖಾಸಗಿ ಸುದ್ದಿವಾಹಿನಿಗಳು ನೇರ ಪ್ರಸಾರ ಮಾಡುವ ಮೂಲಕ ಜನರಿಗೆ ಮಾಹಿತಿ ನೀಡುತ್ತಿದ್ದು, ಇದು ಹಿಂದಿನಿಂದ ನಡೆದುಬಂದಿದೆ. ಆದರೆ ಖಾಸಗಿ ಸುದ್ದಿವಾಹಿನಿಗಳ ಕ್ಯಾಮೆರಾಗಳಿಗೆ ನಿರ್ಬಂಧ ವಿಧಿಸಿರುವುದು ಸರಿಯಲ್ಲ. ಕೂಡಲೇ ಈ ನಿರ್ಧಾರವನ್ನು ಕೈಬಿಡಬೇಕು. ಈ ಬಗ್ಗೆ ಕಲಾಪ ಸಲಹಾ ಸಮಿತಿಯಲ್ಲಿ ಪ್ರಸ್ತಾಪಿಸಲಾಗುವುದು ಎಂದು ಮಾಜಿ ಸಚಿವ ಎಚ್.ಡಿ.ರೇವಣ್ಣ ಹೇಳಿದ್ದಾರೆ.